ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಅಗರ ಕೆರೆಯ ಅಂಗಳದಲ್ಲಿ ಅಮ್ಯೂಸ್‌ಮೆಂಟ್ ಪಾರ್ಕ್ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

1501 (1728) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಗರ ಕೆರೆಯನ್ನು ಪುನರುಜ್ಜೀವನಗೊಳಿಸಲು ಖರ್ಚಾದ ವೆಚ್ಚವೆಷ್ಟು; ಈ ಮೊತ್ತವನ್ನು ಭರಿಸಿದವರು ಯಾರು ; ಈ ಯೋಜನೆಯಲ್ಲಿ ಖಾಸಗಿ ಸಂಸ್ಥೆಗಳ ಪಾತ್ರವೇನು ; ಅಗರ ಕೆರೆಯು ಯಾರ ಸುಪರ್ದಿಯಲ್ಲಿದೆ ;

(ಆ) ಅಗರ ಕೆರೆಯನ್ನು ರಕ್ಷಣೆ ಮತ್ತು ನಿರ್ವಹಣೆ ಹೆಸರಿನಲ್ಲಿ ಖಾಸಗಿಯವರಿಗೆ ವಹಿಸಿಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಖಾಸಗಿ ಸಂಸ್ಥೆಯವರೊಡನೆ ಸರ್ಕಾರ ಯಾವ ರೀತಿಯ ಒಪ್ಪಂದ ಮಾಡಿಕೊಂಡಿದೆ ;

(ಇ) ನಿರ್ವಹಣೆಯ ಗುತ್ತಿಗೆ ವಹಿಸಿದ ಖಾಸಗಿ ಸಂಸ್ಥೆಯವರುಈ ಕೆರೆಯ ಅಂಗಳದಲ್ಲಿ ವಾಣಿಜ್ಯ ಚಟುವಟಿಕೆಗಳನ್ನು ಕೈಗೊಳ್ಳುವ ಸಂಬಂಧ ಸರ್ಕಾರದೊಂದಿಗೆ ಒಪ್ಪಂದ ಮಾಡಿಕೊಂಡಿರುತ್ತಾರೆಯೇ; ವಾಣಿಜ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಅಗರ ಕೆರೆಯಲ್ಲಿ ಅವಕಾಶವಿದೆ ಎಂಬುದಾಗಿ ಸಾರ್ವಜನಿಕರಿಗೆ ಮಾಹಿತಿ ನೀಡಿ ಅರ್ಹ ಸಂಸ್ಥೆಗಳಿಂದ ಟೆಂಡರ್ ಆಹ್ವಾನಿಸಲಾಗಿದೆಯೇ ; ಕೆರೆಗಳ ನಿರ್ವಹಣೆ ಎಂದರೆ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣ ಎಂದು ಕೆರೆಯ ನಿರ್ವಹಣೆಗಾಗಿ ಖಾಸಗಿ ಸಂಸ್ಥೆಯವರಿಗೆ ಕೆರೆಗಳನ್ನು ವಹಿಸಿಕೊಡುವಾಗ ಲಿಖಿತವಾಗಿ ಆದೇಶ ನೀಡಲಾಗಿದೆಯೇ ;

(ಈ) ಕೆರೆಯ ಅಂಗಳದಲ್ಲಿ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಿಸಲು ನಿಯಮದಲ್ಲಿ ಅವಕಾಶವಿದೆಯೇ ; ಅಮ್ಯೂಸ್‌ಮೆಂಟ್ ಪಾರ್ಕ್ ಅಥವಾ ಯಾವುದೇ ವಾಣಿಜ್ಯ ಚಟುವಟಿಕೆಗಳನ್ನು ಕೆರೆಯ ಅಂಗಳದಲ್ಲಿ ನಿರ್ಮಿಸುವುದರಿಂದ ಕೆರೆಯ ನೈಸರ್ಗಿಕ ಪರಿಸರಕ್ಕೆ ಹಾನಿಯುಂಟಾಗುವುದು ಸರ್ಕಾರದ ಗಮನದಲ್ಲಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?